**ಶ್ರೀ ಶಶೀಲ್ ಜಿ.ನಮೋಶಿ, ಶಾಸಕರು, ಕರ್ನಾಟಕ ವಿಧಾನ ಪರಿಷತ್ತು, ಈಶಾನ್ಯ ಶಿಕ್ಷಕರ ಕ್ಷೇತ್ರ, ಕಲಬುರಗಿ ರವರ ಶೂನ್ಯ ವೇಳೆಯ ಪ್ರಸ್ತಾಪಕ್ಕೆ ಮಾನ್ಯ ಕೃಷಿ ಸಚಿವರ ಉತ್ತರ;**

ಇತ್ತೀಚೆಗೆ ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯದ ಬಿ.ಟೆಕ್(ಕೃಷಿ ತಾಂತ್ರಿಕ) ಪದವೀಧರ ವಿದ್ಯಾರ್ಥಿಗಳು ಕರ್ನಾಟಕದಲ್ಲಿ ಪ್ರತ್ಯೇಕ ಕೃಷಿ ತಾಂತ್ರಿಕ ನಿರ್ದೇಶನಾಲಯವನ್ನು ಸ್ಥಾಪಿಸಬೇಕೆಂಬ ಬೇಡಿಕೆಯನ್ನಿಟ್ಟು ಪ್ರತಿಭಟನೆ ನಡೆಸುತ್ತಿರುವುದು ಈಗಾಗಲೇ ಸರ್ಕಾರದ ಗಮನಕ್ಕೆ ಬಂದಿದೆ.

ನಮ್ಮ ಪ್ರಜಾಪ್ರಭುತ್ವದಲ್ಲಿ ನ್ಯಾಯಕ್ಕಾಗಿ ಹೋರಾಡಲು ಪ್ರತಿಯೊಬ್ಬ ನಾಗರಿಕನಿಗೂ ತನ್ನದೇ ಆದ ಮೂಲಭೂತ ಹಕ್ಕನ್ನು ನಮ್ಮ ಸಂವಿಧಾನವು ನೀಡಿದೆ. ಆದರೆ ರಾಯಚೂರಿನಲ್ಲಿರುವ ಕೃಷಿ ವಿಶ್ವವಿದ್ಯಾಲಯದ ಬಿ.ಟೆಕ್ (ಕೃಷಿ ತಾಂತ್ರಿಕ) ಪದವೀದರರ ವಿದ್ಯಾರ್ಥಿಗಳು ಕರ್ನಾಟಕದಲ್ಲಿ ಪ್ರತ್ಯೇಕ ಕೃಷಿ ತಾಂತ್ರಿಕ ನಿರ್ದೇಶನಾಲಯವನ್ನು ಸ್ಥಾಪಿಸಬೇಕೆಂಬ ಬೇಡಿಕೆಯನ್ನಿಟ್ಟು ಪ್ರತಿಭಟನೆವ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯದ ಡೀನ್ ರವರು ವಿಶ್ವವಿದ್ಯಾಲಯದ ವಿದ್ಯಾರ್ಥಿನಿಲಯಕ್ಕೆ (ಬಾಲಕ/ಬಾಲಕಿ) ಪ್ರವೇಶವನ್ನು ನಿಷೇಧಿಸಿ ವಸತಿ ನಿಲಯವನ್ನು ಖಾಲಿ ಮಾಡಲು ದಿನಾಂಕ:16-02-2023 ರಂದು ಆದೇಶಿಸಿರುವುದು ವಿಷಾಧನೀಯ ಸಂಗತಿಯಾಗಿದೆ. ಇದಲ್ಲದೇ ಈ ಆದೇಶವನ್ನು ಪಾಲಿಸದಿದ್ದಲ್ಲಿ ವಿದ್ಯಾರ್ಥಿಗಳಿಗೆ ಮುಂದಿನ ದಿನಗಳಲ್ಲಿ ವಿಶ್ವವಿದ್ಯಾಲಯವು ತೆಗೆದುಕೊಳ್ಳುವ ನಿರ್ಧಾರಗಳಿಗೆ ತಾವೇ ಜವಾಬ್ದಾರರು ಎಂಬ ಇನ್ನೊಂದು ಆದೇಶವನ್ನು ಹೊರಡಿಸಿ ಪ್ರತಿಭಟಿಸುತ್ತಿರುವ ವಿದ್ಯಾರ್ಥಿಗಳ ಮೇಲೆ ಬೆದರಿಕೆಯನ್ನು ಹಾಕುತ್ತಿದ್ದಾರೆ.

ಆದ್ದರಿಂದ ಸರ್ಕಾರವು ಈ ಕೂಡಲೇ ಮಧ್ಯಪ್ರವೇಶಿಸಿ ಈ ಕುರಿತು ವಿಶ್ವ ವಿದ್ಯಾಲಯ ಹೊರಡಿಸಿರುವ ಆದೇಶವನ್ನು ರದ್ದುಗೊಳಿಸಿ ಹಾಗೂ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿ ಸಮಸ್ಯೆಯನ್ನು ಬಗೆಹರಿಸಲು ವಿಶ್ವವಿದ್ಯಾಲಯದ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಈ ಮೂಲಕ ಮಾನ್ಯ ಉನ್ನತ ಶಿಕ್ಷಣ ಇಲಾಖೆಯ ಸಚಿವರನ್ನು ಒತ್ತಾಯಿಸುತ್ತೇನೆ.

**ಉತ್ತರ :-**

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರಿನ , ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಬಿ.ಟೆಕ್ (ಕೃಷಿ ತಾಂತ್ರಿಕತೆ) ಪದವಿಯ ವಿದ್ಯಾರ್ಥಿಗಳು ಪ್ರತ್ಯೇಕ ಕೃಷಿ ತಾಂತ್ರಿಕ ನಿರ್ದೇಶನಾಲಯವನ್ನು ಸ್ಥಾಪಿಸಬೇಕೆಂದು ಹಾಗೂ ಕೃಷಿ ಇಲಾಖೆಯ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳಿಗೆ ಪ್ರತ್ಯೇಕ ಶೇ.15 ರಷ್ಟು ಮೀಸಲಾತಿ ನೀಡಬೇಕೆಂದು ಪ್ರತಿಭಟನೆ ನಡೆಸಿರುವುದು **ಸರ್ಕಾರದ ಗಮನಕ್ಕೆ ಬಂದಿದೆ.**

ಈ ಬಗ್ಗೆ ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 15.02.2023ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಕೃಷಿ ತಾಂತ್ರಿಕ ನಿರ್ದೇಶನಾಲಯವನ್ನು ಸ್ಥಾಪಿಸುವ

ನಿಟ್ಟಿನಲ್ಲಿ ಒಂದು ಸಮಿತಿಯನ್ನು ರಚಿಸುವ ಬಗ್ಗೆ ನಿರ್ಣಯಿಸಲಾಗಿರುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದ್ದರೂ ಸಹ, ವಿದ್ಯಾರ್ಥಿಗಳು ಮುಷ್ಕರವನ್ನು ಮುಂದುವರೆಸಿರುತ್ತಾರೆ. ಆದ್ದರಿಂದ, ಶೈಕ್ಷಣಿಕ ಹಿತದೃಷ್ಟಿಯಿಂದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರು ಇವರು ಮುಷ್ಕರ ನಿರತ ವಿದ್ಯಾರ್ಥಿಗಳನ್ನು ಮುಂದಿನ ಆದೇಶದವರೆಗೂ ವಿಶ್ವವಿದ್ಯಾಲಯದ ವಿದ್ಯಾರ್ಥಿನಿಲಯದ ಪ್ರವೇಶವನ್ನು ನಿಷೇಧಿಸಿ ದಿನಾಂಕ: 16.02.2023ರಂದು ಆದೇಶಿಸಿರುತ್ತಾರೆ. **ಆದರೆ, ಪ್ರಸ್ತುತ ಯಾವುದೇ ವಿದ್ಯಾರ್ಥಿಗಳನ್ನು ವಸತಿನಿಲಯದಿಂದ ಹೊರಹಾಕಿರುವುದಿಲ್ಲ ಹಾಗೂ ದಿ: 16.02.2023ರ ಆದೇಶವನ್ನು ಹೊರತುಪಡಿಸಿ ಬೇರೆ ಯಾವುದೇ ಆದೇಶವನ್ನು ಹೊರಡಿಸಿರುವುದಿಲ್ಲ.**

ಆದರೆ, ವಿದ್ಯಾರ್ಥಿಗಳ ಬೇಡಿಕೆಗಳ ಬಗ್ಗೆ ದಿನಾಂಕ: 14.02.2023ರಂದು ಕೃಷಿ ಇಂಜಿನೀಯರಿಂಗ್ ಕಾಲೇಜು, ಬೆಂಗಳೂರು ಮತ್ತು ರಾಯಚೂರು ವಿದ್ಯಾರ್ಥಿಗಳ ತಂಡವು ಮಾನ್ಯ ಕೃಷಿ ಸಚಿವರಿಗೆ ಮನವಿಯನ್ನು ಸಲ್ಲಿಸಿ, ಈ ಬಗ್ಗೆ ಸುದೀರ್ಘವಾಗಿ ಚರ್ಚಿಸಿದ ನಂತರ, ಮಾನ್ಯ ಸಚಿವರು ನೂತನವಾಗಿ ಕೃಷಿ ಇಂಜಿನಿಯರಿಂಗ್ ನಿರ್ದೇಶನಾಲಯವನ್ನು ಸ್ಥಾಪಿಸುವ ಬಗ್ಗೆ ಅಧ್ಯಯನ ಮಾಡಿ ಪರಿಶೀಲಿಸಿ, ಸರ್ಕಾರಕ್ಕೆ ವರದಿಯನ್ನು ಸಲ್ಲಿಸಲು ರಾಷ್ಟ್ರಮಟ್ಟದ ಕೃಷಿ ಇಂಜಿನಿಯರಿಂಗ್ ಹಾಗೂ ಕೃಷಿ ತಜ್ಞರು ಮತ್ತು ಪರಿಣಿತರನ್ನು ಒಳಗೊಂಡಂತೆ ಸಮಿತಿಯನ್ನು ರಚಿಸಲು ಕ್ರಮ ಕೈಗೊಳ್ಳಲಾಗುವುದು.

(ಬಿ.ಸಿ. ಪಾಟೀಲ್)
ಕೃಷಿ ಸಚಿವರು

ಸಂಖ್ಯೆ: AGRI-16/ANE/2023